ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಎಸ್. ಸಿ. ಪಿ/ಟಿ. ಎಸ್. ಪಿ. ಕಾಮಗಾರಿಗಳ ಕುರಿತು

ಶ್ರೀ ಎಂ. ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

457 (529) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಹಾಸನ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಎಸ್. ಸಿ. ಪಿ/ಟಿ. ಎಸ್. ಪಿ. ಯೋಜನೆಯಡಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು; (ಕಾಮಗಾರಿವಾರು ವಿವರ ನೀಡುವುದು)

(ಆ) ಕಳೆದ 3 ವರ್ಷಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಎಸ್. ಸಿ. ಪಿ/ಟಿ. ಎಸ್. ಪಿ. ಯೋಜನೆಯಡಿ ಸೋಲಾರ್/ವಿದ್ಯುತ್ ಚಾಲಿತ ಕೊಳವೆ ಬಾವಿಗಳನ್ನು ಕೊರೆಸಲು ನಿಗದಿಪಡಿಸಿರುವ ಆರ್ಥಿಕ ಮತ್ತು ಭೌತಿಕ ಗುರಿಗಳೇನು; ಈ ಯೋಜನೆಯಡಿ ನಿರ್ಮಿಸಲಾದ ಸೋಲಾರ್/ ವಿದ್ಯುತ್ ಚಾಲಿತ ಕೊಳವೆ ಬಾವಿಗಳೆಷ್ಟು; ಇದಕ್ಕಾಗಿ ಸರ್ಕಾರವು ಬಿಡುಗಡೆ ಮಾಡಿದ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು? (ಫಲಾನುಭವಿ ಹೆಸರು, ಜಾತಿ, ಗ್ರಾಮ, ಹೋಬಳಿ, ತಾಲ್ಲೂಕು ವಿವರ ನೀಡುವುದು)